# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 14 |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. |

| ಪ್ರಶ್ನೆ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರವು ಆಶಾಕಾರ್ಯಕರ್ತೆಯರಿಗೆ ಮಾಸಿಕ ರೂ**10.000** ನಿಶ್ಚಿತ ಗೌರವಧನ ನೀಡುವುದಾಗಿ ಘೋಷಿಸಿದ್ದರೂ ಈವರೆಗೆ ಅನುಷ್ಠಾನಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಪ್ರಸ್ತುತ ಆಶಾಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಗೌರವಧನದ ಪ್ರಮಾಣ ಎಷ್ಟು: ಕಳೆದ **3** ವರ್ಷಗಳಲ್ಲಿ ಗೌರವಧನ ಪಾವತಿಯಲ್ಲಿ ಎಷ್ಟು ಬಾರಿ ವಿಳಂಬವಾಗಿದೆ. | ಪ್ರಸ್ತುತ ಆಶಾ ಕಾರ್ಯಕರ್ತೆಯರಿಗೆ ಕಾರ್ಯಕ್ಷಮತೆಯ ಆಧಾರದ ಮೇಲೆ ಆಶಾ ಕಾರ್ಯಕರ್ತೆಯರಿಗೆ ಕೆಳಕಂಡ ಗೌರವಧನ ಮತ್ತು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. (ಕೋಷ್ಟಕ ಕೆಳಗೆ) ಕಾರ್ಯನಿರ್ವಹಿಸಿದ ಎಲ್ಲಾ ಆಶಾ ಕಾರ್ಯಕರ್ತೆಯರಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಕಾರಣಗಳನ್ನು ಹೊರತುಪಡಿಸಿ ಕಾಲಮಿತಿಯೊಳಗೆ ಪ್ರತಿ ತಿಂಗಳ 10 ನೇ ತಾರೀಖಿನೊಳಗೆ ಮಾಸಿಕ ಗೌರವಧನ ಮತ್ತು ಪ್ರೋತ್ಸಾಹಧನವನ್ನು ಪಾವತಿ ಮಾಡಲಾಗುತ್ತಿದೆ. |

| ಕ್ರ. ಸಂ | ವಿವರ | ರೂಪಾಯಿಗಳಲ್ಲಿ |
|---|---|---|
| 1 | 12 ಷರತ್ತುಗಳಿಗೆ ರಾಜ್ಯ ಸರ್ಕಾರದಿಂದ ಮಾಸಿಕ ಗೌರವಧನವನ್ನು ನೀಡಲಾಗುತ್ತಿದೆ. | ರೂ.5000/- |
| 2 | ರಾಷ್ಟ್ರೀಯ ಆರೋಗ್ಯ ಅಭಿಯಾನದಿಂದ ಆವರ್ತಕ ಮತ್ತು ನಿಯಮಿತ 8 ಚಟುವಟಿಕೆಗಳಿಗೆ ನೀಡಲಾಗುವ ಪ್ರೋತ್ಸಾಹಧನ | ರೂ.2000/- |
| 3 | ತಂಡ ಆಧಾರಿತ ಪ್ರೋತ್ಸಾಹ ಧನ | ರೂ.1000/- |
| 4 | ರಾಷ್ಟ್ರೀಯ ಆರೋಗ್ಯ ಅಭಿಯಾನದಿಂದ ಆಶಾಕಾರ್ಯಕರ್ತೆಯರಿಗೆ ಕಾರ್ಯಕ್ಷಮತೆಯ ಆಧಾರದ ಮೇಲೆ ನೀಡಲಾಗುವ ಪ್ರೋತ್ಸಾಹಧನ ಅಂದಾಜು | ಅಂದಾಜು ರೂ.500 ರಿಂದ ರೂ.1200 |

| | | |
|---|---|---|
| ಇ) | ಕೋವಿಡ್ ಸಂದರ್ಭದಲ್ಲಿ ಅತಿಯಾದ ಜವಾಬ್ದಾರಿ ಹೊತ್ತು ಶ್ರಮಿಸಿದ ಆಶಾಕಾರ್ಯಕರ್ತೆಯರಿಗೆ ಸರ್ಕಾರ ಈವರೆಗೆ ಸೂಕ್ತ ಮಾನ್ಯತೆ ಮತ್ತು ನಿಗದಿತ ವೇತನ ನೀಡದೆ ತಾರತಮ್ಯ ಮಾಡಿದಂತಾಗಿಲ್ಲವೆ. | ಆಶಾಕಾರ್ಯಕರ್ತೆಯರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತಾತ್ಕಾಲಿಕ/ ಹೊರಗುತ್ತಿಗೆ/ ಒಳಗುತ್ತಿಗೆ ನೌಕರರಾಗಿರುವುದಿಲ್ಲ. ಇವರು ಸ್ವಯಂ ಪ್ರೇರಿತ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರಿಗೆ ಕಾರ್ಯಕ್ಷಮತೆಯ ಆಧಾರದ ಮೇಲೆ ಗೌರವಧನ/ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. ಆಶಾ ಕಾರ್ಯಕರ್ತೆಯರಿಗೆ ವೇತನ ಅನ್ವಯಿಸುವುದಿಲ್ಲ.<br><br>ಕೋವಿಡ್ ಸಮಯದಲ್ಲಿ ಕೋವಿಡ್-19 ರ ನಿಯಂತ್ರಣ ಚಟುವಟಿಕೆಗಳಲ್ಲಿ ಭಾಗಿಯಾದ ಆಶಾ ಕಾರ್ಯಕರ್ತೆಯರಿಗೆ ಮಾನ್ಯತೆ ನೀಡುವ ನಿಟ್ಟಿನಲ್ಲಿ ಹೆಚ್ಚುವರಿಯಾಗಿ ಮಾಸಿಕ ರೂ. 1000/- ಗಳ ಪ್ರೋತ್ಸಾಹಧನವನ್ನು ನೀಡಲಾಗಿದೆ. |
| ಈ) | ಆಶಾ ಕಾರ್ಯಕರ್ತೆಯರಿಗೆ ನಿಗದಿತ ಗೌರವಧನ ಜಾರಿಗೊಳಿಸಲು ಅಧಿಕೃತ ಆದೇಶ ಹೊರಡಿಸಲಾಗಿದೆಯೇ: ಇಲ್ಲದಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮವೇನು: | ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹಧನ/ ಗೌರವಧನವನ್ನು ಜಾರಿಗೊಳಿಸಲು ಅಧಿಕೃತ ಆದೇಶ ಹೊರಡಿಸಲಾಗಿದೆ. |
| ಉ) | ಆಶಾ ಕಾರ್ಯಕರ್ತೆಯರ ಗೌರವಧನವನ್ನು ಹೆಚ್ಚಿಸಲು ಸರ್ಕಾರ ಯಾವಾಗ ಪರಿಷ್ಕೃತ ಆದೇಶ ಹೊರಡಿಸಲಿದೆ: ಈ ಬಗ್ಗೆ ಕೂಡಲೇ ಕ್ರಮಕೈಗೊಳ್ಳಲಾಗುವುದೇ? | ರಾಷ್ಟ್ರೀಯ ಆರೋಗ್ಯ ಅಭಿಯಾನದ ಅನುದಾನದಿಂದ ತಂಡ ಆಧಾರಿತ ಪ್ರೋತ್ಸಾಹಧನವನ್ನು ಆಯುಷ್ಮಾನ್ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಶಾಕಾರ್ಯಕರ್ತೆಯರಿಗೆ ಮಾತ್ರ ನೀಡಲಾಗುತ್ತಿತ್ತು, ಇದನ್ನು ಹೊರತು ಪಡಿಸಿ ಆಯುಷ್ಮಾನ್ ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೆ ಏರದ ಆರೋಗ್ಯ ಉಪಕೇಂದ್ರಗಳು ಮತ್ತು ನಗರ ಪ್ರದೇಶದ ಆಶಾಕಾರ್ಯಕರ್ತೆಯರಿಗೆ ಈ ಪ್ರೋತ್ಸಾಹಧನವನ್ನು ನೀಡದ ಕಾರಣ ತಾರತಮ್ಯವನ್ನು ನೀಗಿಸಲು ಎಲ್ಲಾ ಆಶಾಕಾರ್ಯಕರ್ತೆಯರು ಸಮಾನವಾಗಿ ಪ್ರೋತ್ಸಾಹಧನವನ್ನು ಪಡೆಯುವ ನಿಟ್ಟಿನಲ್ಲಿ ರಾಜ್ಯಸರ್ಕಾರದ ಅನುದಾನದಿಂದ ತಂಡ ಆಧಾರಿತ ಪ್ರೋತ್ಸಾಹಧನ ರೂ.1000/- ಗಳನ್ನು 2025-26 ನೇ ಸಾಲಿನಿಂದ ನೀಡಲು ಆದೇಶ ಸಂಖ್ಯೆ: ಆಕುಕ 53 ಎಫ್.ಪಿ.ಇ 2025, ದಿನಾಂಕ:15.05.2025 ರಂದು ಅನುಮೋದನೆ ನೀಡಲಾಗಿದೆ.<br><br>ಭಾರತ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದ ನೀತಿ ನಿರೂಪಣಾ ಸಮಿತಿಯಾದ Mission Steering group ನ 9ನೇ ಸಭೆಯಲ್ಲಿ ಆಶಾ ಕಾರ್ಯರ್ತೆಯರಿಗೆ ಆವರ್ತಕ ಮತ್ತು ನಿಯಮಿತ ಚಟುವಟಿಕೆಗಳಿಗೆ (Routine & Recurring activities) ಪ್ರತಿ ಮಾಹೆ ನೀಡಲಾಗುವ ಪ್ರೋತ್ಸಾಹಧನ ರೂ.2000/-ಗಳನ್ನು ಲಭ್ಯವಿರುವ ಸಂಪನ್ಮೂಲ ಮಿತಿಗೆ ಒಳಪಟ್ಟು ರೂ.3500/- ಗಳಿಗೆ ಏರಿಕೆ ಮಾಡಲು ಅನುಮೋದನೆ ನೀಡಿದ್ದು, ಕಾರ್ಯಕ್ರಮ ಅನುಷ್ಠಾನ ಯೋಜನೆಯಲ್ಲಿ (programme implementation plan) ಪ್ರಸ್ತಾವನೆಯನ್ನು ಸಲ್ಲಿಸಲು ಆಗಸ್ಟ್ 4 2025ರ ಮಿಂಚಂಚೆ ಸಂದೇಶದಲ್ಲಿ ತಿಳಿಸಿದ್ದು, ಪೂರಕ ಪಿ.ಐ.ಪಿ ಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಹಾಗೂ ಅನುಮೋದನೆಯ ನಂತರ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಆಕುಕ 50 ಎಸ್.ಟಿ.ಕ್ಯೂ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು